# ಕರ್ನಾಟಕ ಪರೀಕ್ಷಾ ಪ್ರಾಧಿಕಾರ
# Karnataka Examinations Authority

ಸಂಖ್ಯೆ:ಇಡಿ/ಕೆಇಎ/ಪತ್ರಿಕಾ ಪ್ರಕಟಣೆ/2020 ದಿನಾಂಕ: 25-06-2020

**ಸಾಮಾನ್ಯ ಪ್ರವೇಶ ಪರೀಕ್ಷೆ – 2020**

**ಹೊರನಾಡು ಮತ್ತು ಗಡಿನಾಡು ಅಭ್ಯರ್ಥಿಗಳಿಗೆ ಕನ್ನಡ ಭಾಷೆ ಹಾಗು ಸಿಇಟಿ-2020 ರ ಪರೀಕ್ಷಾ ಕೇಂದ್ರಗಳನ್ನು ಬದಲಾಯಿಸಿಕೊಳ್ಳಲು ಅವಕಾಶ**

ಹೊರನಾಡು ಮತ್ತು ಗಡಿನಾಡು ಕನ್ನಡಿಗ ಅಭ್ಯರ್ಥಿಗಳಿಗೆ ಈ ಮೊದಲು ಬೆಂಗಳೂರು ಕೇಂದ್ರದಲ್ಲಿ ಮಾತ್ರ ಸಿಇಟಿ ಮತ್ತು ಕನ್ನಡ ಭಾಷೆ ಪರೀಕ್ಷೆಯನ್ನು ನಡೆಸುವುದಾಗಿ ಪ್ರಕಟಿಸಲಾಗಿತ್ತು. ಆದರೆ ಪ್ರಸ್ತುತ ಕೋವಿಡ್ – 19 ರ ಪರಿಸ್ಥಿತಿಯಿಂದ ಬೆಂಗಳೂರು, ಬೀದರ್, ವಿಜಯಪುರ (ಬಿಜಾಪುರ), ಬಳ್ಳಾರಿ, ಬೆಳಗಾವಿ ಮತ್ತು ಮಂಗಳೂರು ಕೇಂದ್ರದಲ್ಲಿಯೂ ಕನ್ನಡ ಭಾಷೆ ಪರೀಕ್ಷೆಯನ್ನು ನಡೆಸಲಾಗುವುದು. ಆದ್ದರಿಂದ ಹೊರನಾಡು ಮತ್ತು ಗಡಿನಾಡು ಕನ್ನಡಿಗ ಅಭ್ಯರ್ಥಿಗಳು ಸಿಇಟಿ ಪರೀಕ್ಷೆಗೆ ಮತ್ತು ಕನ್ನಡ ಭಾಷೆ ಪರೀಕ್ಷೆಗೆ ಈ ಮೇಲಿನ ಯಾವುದಾದರೂ ಒಂದು ಕೇಂದ್ರದಲ್ಲಿ ಹಾಜರಾಗಬಹುದು. ಇದಕ್ಕೆ ಅನುಗುಣವಾಗಿ ಪರೀಕ್ಷಾ ಕೇಂದ್ರಗಳನ್ನು ದಿನಾಂಕ 26-06-2020 ರ ಬೆಳಿಗ್ಗೆ 11.00 ರಿಂದ 29-06-2020 ರ ಸಂಜೆ 6.00 ವರೆಗೆ ಬದಲಾಯಿಸಿಕೊಳ್ಳಬಹುದಾಗಿದೆ.

**ಸಿಇಟಿ-2020ಕ್ಕೆ ಪರೀಕ್ಷಾ ಕೇಂದ್ರಗಳನ್ನು ಬದಲಾಯಿಸಿಕೊಳ್ಳಲು ಹಾಗು ಅರ್ಜಿಯಲ್ಲಿನ ಮಾಹಿತಿಯನ್ನು ಬದಲಾಯಿಸಿಕೊಳ್ಳಲು ಕೊನೆಯ ಅವಕಾಶ**

ಕೋವಿಡ್-19 ಪರಿಸ್ಥಿತಿ ಹಿನ್ನಲೆಯಲ್ಲಿ, ಸಿಇಟಿ-2020ಕ್ಕೆ ಪರೀಕ್ಷಾ ಕೇಂದ್ರಗಳ ಬದಲಾವಣೆ ಮಾಡಿಕೊಳ್ಳಲು ಮತ್ತು ಅರ್ಜಿಗಳಲ್ಲಿನ ಮಾಹಿತಿಯನ್ನು ಅರ್ಹತೆಗೆ ಅನುಗುಣವಾಗಿ ಮಾರ್ಪಡಿಸಲು ದಿನಾಂಕ 26-06-2020 ರ ಬೆಳಿಗ್ಗೆ 11.00 ರಿಂದ 29-06-2020 ರ ಸಂಜೆ 6.00 ವರೆಗೆ ಮತ್ತೊಂದು ಬಾರಿ ಕೊನೆಯ ಅವಕಾಶವನ್ನು ನೀಡಲಾಗಿದೆ. ಅಭ್ಯರ್ಥಿಗಳು ಪರೀಕ್ಷಾ ಕೇಂದ್ರಗಳನ್ನು ಹಾಗು ತಾವು ಆನ್‌ಲೈನ್ ಮೂಲಕ ಸಲ್ಲಿಸಿರುವ ಅರ್ಜಿಯಲ್ಲಿ ವಿವರಗಳನ್ನು ಅರ್ಹತೆಗೆ ಅನುಗುಣವಾಗಿ ಅಗತ್ಯವಿದ್ದಲ್ಲಿ ಮಾರ್ಪಡಿಸಿಕೊಳ್ಳಬಹುದಾಗಿದೆ. **ಇದು ಅಂತಿಮ ಅವಕಾಶವಾಗಿದ್ದು ಮತ್ತೊಂದು ಬಾರಿ ಅವಕಾಶವನ್ನು ನೀಡಲಾಗುವುದಿಲ್ಲ.**

**ಸಿಇಟಿ-2020ಕ್ಕೆ ರಬಕವಿ ಬನಹಟ್ಟಿ ತಾಲ್ಲೂಕು ಸೇರ್ಪಡೆ**

ಅಭ್ಯರ್ಥಿಗಳ ಮನವಿ ಮೇರೆಗೆ ರಬಕವಿ ಬನಹಟ್ಟಿ ತಾಲ್ಲೂಕಿನಲ್ಲಿಯೂ ಸಿಇಟಿ-2020 ಪರೀಕ್ಷಾ ಕೇಂದ್ರವನ್ನು ತೆರೆದಿರುವುದರಿಂದ, ಇಚ್ಛೆಯುಳ್ಳ ಅಭ್ಯರ್ಥಿಗಳು ಬನಹಟ್ಟಿ ಪರೀಕ್ಷಾ ಕೇಂದ್ರವನ್ನು ಈ ಮೇಲಿನ ದಿನಾಂಕಗಳಂದು ಆಯ್ಕೆ ಮಾಡಿಕೊಳ್ಳಬಹುದಾಗಿದೆ.

ಹೆಚ್ಚಿನ ವಿವರಗಳಿಗಾಗಿ ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ಗೆ ಭೇಟಿ ನೀಡಬಹುದು ಮತ್ತು ಮಾಹಿತಿಯನ್ನು ಪ್ರಾಧಿಕಾರದ ಇಮೇಲ್ keauthority-ka@nic.in ಗೆ ಕಳುಹಿಸುವ ಮೂಲಕ ಪಡೆಯಬಹುದಾಗಿದೆ.

ಸಹಿ/-
ಕಾರ್ಯನಿರ್ವಾಹಕ ನಿರ್ದೇಶಕರು.

**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012**
18th Cross, Sampige Road, Malleshwaram, Bengaluru – 560 012.
Phone: 080-2356 4583, 2336 1786, Fax: 080-2346 1576
e-mail : keauthority-ka@nic.in Website : http://kea.kar.nic.in